ಮೈಸೂರ ಗೆಜಿಟ್.

ನಂ. 39.] ಸರ್ಕಾರದಿಂದ ಪ್ರಾಯಿಷ್ ಆದ್ದು. [ನಂ. 36.

ಬೆಂಗಳೂರು, ಗುರುವಾರ, ಸೆಪ್ಟೆಂಬರ್ ತಾ|| 8, ಸ|| 1904.

IIನೆ ಭಾಗ.

ಇಂಡ್ಯಗವರ್ಮೆಂಟ್, ರೆಸಿಡೆಂಟರು, ಚೀಫ ಜಡ್ಜ್‌ಗಳು ಮೊದಲಾದವರಿಂದ ಕೊಡೋಣಾದ ಇಸ್ತಿಹಾರ್‌ನಾಮೆಗಳು.

ವಿದ್ಯಾಭ್ಯಾಸದ ಇಲ್ಲಾಖಾ.

ನೋಟಿಫಿಕೇರ್ಷ ಡಿ. ನಂಬರು 9.

ತಾರೀಖು 29ನೆ ಮಾಹೆ ಆಗಸ್ಟು, ಸ|| 1904ನೆ ಇಸವಿ.

ಮೈಸೂರು ಸೀಮೆಯ ಶ್ರೀಮತ್ ಮಹಾರಾಜಾ ಸಾಹೇಬರವರ ಗವರ್ನಮೆಂಟ್ ಸ|| ಮಜಕೂರು ಆಗಸ್ಟು 6—8ನೆ ಮುಕ್ತಂ 1091—10—5—Ed., ನೆ ನಂಬರು ನೋಟಿಫಿಕೇರ್ಷ ಅನ್ವಯಿಸಿ ಮೈಸೂರು ಸೀಮೆಯ ದೇಶಭಾಷೆಯ ಗವರ್ನಮೆಂಟ್ ತಾಲ್ಲೂಕು, ತಾಲ್ಲೂಕು ಬಾಂಬ್, ಮತ್ತು ಹೋಬಳಿ ಸ್ಕೂಲಿಗೆಳಲ್ಲಿ ಓದುವ ಹೊಲೆಯರು, ಮಾದಿಗರು, ಲಂಬಾಣಿಯವರು, ಕೊರಚರು, ಕೊರವರು ಮತ್ತು ನಾಯಿಂದರು ಈ ಜಾತಿಯ ವಿದ್ಯಾರ್ಥಿಗಳಿಗೆ 1904ನೆ ಇಸವಿ ಜುಲೈ ಗುರ್ತೇ ಲಾಗಾಯಿತು ಎರಡು ವರ್ಷಗಳ ಕಾಲ ಸ್ಕೂಲ್ ಫೀ ಮಾಫ್ ಮಾಡಿರುತ್ತೆ.

ಪ್ರಕಟನ ಪತ್ರಿಕೆ.

ಮೈಸೂರು ದೇಶೀಯ ಪರೀಕ್ಷೆಗಳ್ಳು.

ಸ|| 1904ನೆ ಇಸವಿ ಸೆಪ್ಟೆಂಬರ್ ತಾರೀಖು 2ನೆ ಡಿ. ನಂಬರು 10.

ಮೈಸೂರು ದೇಶೀಯ ಪರೀಕ್ಷೆಗಳು ಸ|| 1904ನೆ ಇಸವಿ ನವೆಂಬರು ತಿಂಗಳು ಮಂಗಳವಾರ ಹದಿನೈದನೇ ತಾರೀಖಿನಿಂದ ಆರಂಭವಾಗಿ ಪ್ರತಿ ಡಿಸ್ಟ್ರಿಕ್ಟಿನ ಮುಖ್ಯಸ್ಥಳ (Head-quarters) ದಲ್ಲಿಯೂ ಮತ್ತು ಚಿಕ್ಕಬಳ್ಳಾಪುರದಲ್ಲಿಯೂ, ಚನ್ನಪಟ್ಟಣ ದಲ್ಲಿಯೂ ನಡೆಯಿಸಲ್ಪಡುವವು :—

ಪರೀಕ್ಷೆಗಳು ಇದರಲ್ಲೀ ಕಂಡ ಕಾಲ ಮತ್ತು ವಿಷಯಗಳ ಕ್ರಮಗಳನ್ನನುಸರಿಸಿ ನಡೆಯಿಸಲ್ಪಡುವವು :—

ಮೈಸೂರು ಲೋವರ್ ಸೆಕಂಡರಿ ಪರೀಕ್ಷೆ.

ದಿವಸ.	ಕಾಲ.	ವಿಷಯಗಳು.	ಅಂಕಗಳು.
ಮೊದಲನೇ ದಿವಸ	10ರಿಂದ 12—30 ವರೆಗೆ	ಪ್ರಥಮ ಅಥವಾ ಆವಶ್ಯಕ ಭಾಷೆ—	
		ಇಂಗ್ಲಿಷ್ ವ್ಯಾಕರಣ ಮತ್ತು ಭಾವಾರ್ಥಗ್ರಂಥ.	60
		ಸಂಸ್ಕೃತದ ಮತ್ತು ಫಾರಸಿಯ ವ್ಯಾಕರಣ ಮತ್ತು ಭಾಷಾ ಗ್ರಂಥಗಳು	65
	1—30ರಿಂದ 2—30ರ ವರೆಗೆ.	ಪ್ರಥಮ ಅಥವಾ ಆವಶ್ಯಕ ಭಾಷೆ—	
		ಭಾಷಾಂತರೀಕರಣ—ಇಂಗ್ಲಿಷ್, ಸಂಸ್ಕೃತ, ಫಾರಸಿ	
		ಇಂಗ್ಲಿಷ್ ಪ್ರಬಂಧರಚನೆ, ಇಂಗ್ಲೀಷನ್ನು ದೇಶಭಾಷೆಯಾಗಿ ಉಳ್ಳಂಥಾವರಿಗೆ	35
	2—35ರಿಂದ 3—5 ವರೆಗೆ.	ಪ್ರಥಮ ಅಥವಾ ಆವಶ್ಯಕ ಭಾಷೆ—	
		ಉಕ್ತಲೇಖನ—ಇಂಗ್ಲೀಷ್	15
		ಸಂಸ್ಕೃತ ; ಫಾರಸಿ	10
	3—10ರಿಂದ 3—40 ವರೆಗೆ	ಪ್ರಥಮ ಅಥವಾ ಆವಶ್ಯಕ ಭಾಷೆ—	
		ಕೈಬರವಣಿಗೆ—ಇಂಗ್ಲೀಷ್ ; ಸಂಸ್ಕೃತ ; ಫಾರಸಿ	10
	3—45ರಿಂದ 4—15 ವರೆಗೆ	ಉರ್ದು ಉಕ್ತಲೇಖನ	10
	4—20ರಿಂದ 4—50 ವರೆಗೆ	ಉರ್ದು ಕೈಬರವಣಿಗೆ	10

393.

ದಿವಸ.	ಕಾಲ.	ವಿಷಯಗಳು.	ಅಂಕಗಳು.
ಎರಡನೇ ದಿವಸ	10ರಿಂದ 1ರ ವರೆಗೆ	ಕನ್ನಡ ಪ್ರಥಮ ಅಥವಾ ದ್ವಿತೀಯ ಭಾಷೆ – ಕನ್ನಡ ವ್ಯಾಕರಣ, ಭಾಷಾಗ್ರಂಥ ಮತ್ತು ಪ್ರಬಂಧರಚನೆ .	100
		ಫಾರಸಿ ದ್ವಿತೀಯ ಭಾಷೆ – ಫಾರಸಿ ವ್ಯಾಕರಣ, ಭಾಷಾಗ್ರಂಥ ಮತ್ತು ಭಾಷಾಂತರೀಕರಣ ...	100
	2ರಿಂದ 5ರ ವರೆಗೆ	ಸಂಸ್ಕೃತ ದ್ವಿತೀಯ ಭಾಷೆ— ಸಂಸ್ಕೃತ ವ್ಯಾಕರಣ, ಭಾಷಾಗ್ರಂಥ ಮತ್ತು ಭಾಷಾಂತರೀಕರಣ ..	100
		ಲಾರ್ಟ್ ದ್ವಿತೀಯ ಭಾಷೆ ಲಾರ್ಟ್ ವ್ಯಾಕರಣ, ಭಾಷಾಗ್ರಂಥ ಮತ್ತು ಭಾಷಾಂತರೀಕರಣ ..	120
		ದೇಶಭಾಷೆ ಪ್ರಥಮ ಅಥವಾ ದ್ವಿತೀಯ ಭಾಷೆ— ತೆಲುಗು, ಮತ್ತು ಉರ್ದು, ವ್ಯಾಕರಣ, ಭಾಷಾಗ್ರಂಥಗಳು ಮತ್ತು ಪ್ರಬಂಧರಚನೆ	100
ಮೂರನೇ ದಿವಸ	10ರಿಂದ 12 ವರೆಗೆ	ಅಂಕಗಣಿತ	100
	12–5ರಿಂದ 12–35 ವರೆಗೆ	ದೇಶಭಾಷೆ ಪ್ರಥಮ ಅಥವಾ ದ್ವಿತೀಯ ಭಾಷೆ— ಕನ್ನಡ ಮತ್ತು ತೆಲುಗು ಅಕ್ಷರ ಸಂಯೋಜನ	10
	12–40ರಿಂದ 1–10ವರೆಗೆ	ದೇಶಭಾಷೆ ಪ್ರಥಮ ಅಥವಾ ದ್ವಿತೀಯ ಭಾಷೆ— ಕನ್ನಡ ಮತ್ತು ತೆಲುಗು ಕೈ ಬರವಣಿಗೆ	10
	2ರಿಂದ 3–30ವರೆಗೆ	ಆರೋಗ್ಯ ಶಾಸ್ತ್ರ)	100
	3–45ರಿಂದ 4–15 ವರೆಗೆ	ಐಚ್ಛಿಕ ದ್ವಿತೀಯ ಭಾಷೆ — ಸಂಸ್ಕೃತ ಮತ್ತು ಫಾರಸಿ ಅಕ್ಷರ ಸಂಯೋಜನ	10
	4–20ರಿಂದ 4–50 ವರೆಗೆ	ಐಚ್ಛಿಕ ದ್ವಿತೀಯ ಭಾಷೆ — ಸಂಸ್ಕೃತ ಮತ್ತು ಫಾರಸಿ ಕೈ ಬರವಣಿಗೆ	10
ನಾಲ್ಕನೇ ದಿವಸ.	10ರಿಂದ 1ರ ವರೆಗೆ	ಚರಿತ್ರೆ, ಭೂಗೋಳಶಾಸ್ತ್ರ) ಮತ್ತು ಭೂಪಠ ಬರೆಯುವುದು	120
	2ರಿಂದ 3–35 ವರೆಗೆ	ವ್ಯವಸಾಯ ಶಾಸ್ತ್ರ)	100
ಐದನೇ ದಿವಸ ...	10ರಿಂದ 11–30 ವರೆಗೆ	ಕ್ಷೇತ್ರಗಣಿತ	100
	11–35ರಿಂದ 1–5 ವರೆಗೆ	ಪ್ರಾಕೃತಿಕ ಭೂಗೋಳ ಶಾಸ್ತ್ರ)	100
	2 ರಿಂದ 3—30 ವರೆಗೆ	ಹೊಲಿಗೆ	50
		ಆಂಗ್ಲೇಯರ ಚರಿತ್ರೆ	100
	3—35ರಿಂದ 5—5ವರೆಗೆ	ಪಾಕಶಾಸ್ತ್ರ)	50
		ಗೃಹಕೃತ್ಯ ನಡೆಯಿಸುವ ಕ್ರಮ	100

ಮೈಸೂರು ದೇಶಭಾಷೆಯು ಅಪ್ಪರ್ ಸೆಕಂಡರಿ ಪರೀಕ್ಷೆ.

ದಿನ.	ಘಂಟೆ.	ವಿಷಯಗಳು.	ಅಂಕಗಳು.
ಮೊದಲನೇ ದಿನ	10 - 1	ಪ್ರಥಮ ಭಾಷೆ—ಕನ್ನಡ ಅಥವಾ ಉರ್ದು ಗ್ರಂಥಗಳು	60
	2—4	ಅದೇ ಡಿಟೋ ಪ್ರಾಥವ್ಯಾಕರಣ	40
	4·5—5·5	ಅದೇ ಡಿಟೋ ಪ್ರಬಂಧರಚನೆ	30 } 130
ಎರಡನೇ ದಿನ ...	10 – 1	ಪ್ರಥಮ ಅಥವಾ ದ್ವಿತೀಯ ಭಾಷೆ –ಪರ್ಷಿಯ ಗ್ರಂಥಗಳು	60
	2—4	ಡಿಟೋ ಡಿಟೋ ವ್ಯಾಕರಣ	40 } 130
	4·5—5·5	ಡಿಟೋ ಡಿಟೋ ಪರ್ಷಿಯ ಭಾಷೆಗೆ ಭಾಷಾಂತರೀಕರಣ	30
ಮೂರನೇ ದಿನ.	10—1	ದ್ವಿತೀಯ ಭಾಷೆ —ಸಂಸ್ಕೃತ ಅಥವಾ ಅರಾಬಿಕ್, ಗ್ರಂಥಗಳು, ವ್ಯಾಕರಣ, ಪದವಿನ್ಯಾಸ, ಭಾಷಾ ಶೈಲಿ	60
	2—5	ಭಾಷಾಂತರೀಕರಣ ...	70 } 130

394

1309

ದಿನ.	ಘಂಟೆ.	ವಿಷಯಗಳು.	ಅಂಕಗಳು.	
ನಾಲ್ಕನೇ ದಿನ ...	10—12	ರೇಖಾಗಣಿತ, ಕ್ಷೇತ್ರಗಣಿತ	40	120
	1—3·30	ಅಂಕಗಣಿತ	50	
	3·35—5·5	ಬೀಜಗಣಿತ	30	
ಐದನೇ ದಿನ ...	10—12	ಪ್ರಾಕೃತಿಕ ಶಾಸ್ತ್ರ (Physical science) ..	40	120
	1—3	ಆರೋಗ್ಯಶಾಸ್ತ್ರ	40	
	3·5—5·5	ಕೃಷಿಶಾಸ್ತ್ರ	40	
ಆರನೇ ದಿನ ...	10—1	ಚರಿತ್ರೆ	50	100
	2—5	ಭೂಗೋಳ ಶಾಸ್ತ್ರ	50	
		ಒಟ್ಟು		600

ಪರೀಕ್ಷೆಯರಿಗೆ ಹೊಲಿಗೆಯಲ್ಲಿಯೂ ಸಂಗೀತದಲ್ಲಿಯೂ ಪರೀಕ್ಷೆಯುಂಟು. ಪ್ರತಿ ವರ್ಷದ ಮೊದಲನೇ ದಿನ ತತ್ಪೂರ್ವ ಪ್ರಕಟನೆಯಲ್ಲಿ ಹೇಳುವ ಸ್ಥಳ, ಕಾಲಗಳಲ್ಲಿ ನಡೆಯುವುದು.

ಕರ್ನಾಟಕ ಪಂಡಿತ ಪರೀಕ್ಷೆ.

ದಿನ.	ಘಂಟೆ.	ವಿಷಯಗಳು.	ಅಂಕಗಳು.	
ಮೊದಲನೇ ದಿನ ...	10—1	ಕನ್ನಡ ವ್ಯಾಕರಣ	120	200
	2—5	ಕನ್ನಡ ಛಂದಸ್ಸು ಮತ್ತು ಅಲಂಕಾರ	80	
ಎರಡನೇ ದಿನ ..	10—1	ಕನ್ನಡ ಗ್ರಂಥಗಳು ಮೊದಲನೇ ಪತ್ರಿಕೆ	100	400
	2—5	ಅದೇ ಎರಡನೇ ಪತ್ರಿಕೆ	100	
ಮೂರನೇ ದಿನ ...	10—1	ಅದೇ ಮೂರನೇ ಪತ್ರಿಕೆ	100	
	2—5	ಅದೇ ನಾಲ್ಕನೇ ಪತ್ರಿಕೆ	100	
ನಾಲ್ಕನೇ ದಿನ	10—1	ಕನ್ನಡ ಪ್ರಬಂಧರಚನೆ	100	
	2—5	ಭಾಷಾಂತರೀಕರಣ	100	
ಐದನೇ ದಿನ ...	10—1	ಸಂಸ್ಕೃತ ವ್ಯಾಕರಣ	80	200
	2—5	ಸಂಸ್ಕೃತ ಛಂದಸ್ಸು ಮತ್ತು ಅಲಂಕಾರ	120	
ಆರನೇ ದಿನ ..	10—1	ಸಂಸ್ಕೃತ ಗ್ರಂಥಗಳು ಮೊದಲನೇ ಪತ್ರಿಕೆ	100	200
	2—5	ಅದೇ ಎರಡನೇ ಪತ್ರಿಕೆ ..	100	

ಇದರಿಂದ ನಿಬಂಧನೆಗಳಿಗೆ ವಿದ್ಯಾರ್ಥಿಗಳು ಮುಖ್ಯವಾಗಿ ಗಮನವನ್ನು ಕೊಡತಕ್ಕದ್ದು:—

(1) ಪರೀಕ್ಷೆಯು ಆರಂಭಿಸುವದಕ್ಕೆ ನಿಶ್ಚಿತವಾದ ಕಾಲ ಮೊದಲು ಅರ್ಧ ಘಂಟೆ ಆಗುವ ವರೆಗೂ ಪರೀಕ್ಷಾ ಕೊಠಡಿಯನ್ನು ಬಿಡಲು ಯಾವ ದಿವಸದಲ್ಲಿಯಾಗಲಿ ಯಾವ ವಿದ್ಯಾರ್ಥಿಗೂ ಅಪ್ಪಣೆ ಕೊಡುವದಿಲ್ಲವು. ಮತ್ತು ಅಂಥಾ ಅರ್ಧ ಘಂಟೆ ಕಳೆದ ಮೇಲೆ ಬರುವ ಯಾವ ವಿದ್ಯಾರ್ಥಿಗಳಿಗೂ ಪ್ರವೇಶಕ್ಕೆ ಅವಕಾಶ ಹುಟ್ಟಲ್ಲಾರದು.

(2) ಪರೀಕ್ಷೆ ಆಗುತ್ತಿರುವ ಕಾಲದಲ್ಲಿ ಪರೀಕ್ಷಾ ಕೊಠಡಿಯನ್ನು ಬಂದಾವರ್ತಿ ಬಿಟ್ಟು ಬಂದನಂತರ ಪುನಹ ಪ್ರವೇಶಿಸಲು ಯಾವ ವಿದ್ಯಾರ್ಥಿಗೂ ಅವಕಾಶ ಉಂಟಾಗಲಾರದು, ಅಲ್ಲದೆ ತನ್ನ ಉತ್ತರ ಕಾಗದಗಳನ್ನು ಸಂಪೂರ್ತಿಯಾಗಿ ಕೊಟ್ಟವಿನಹ ಪರೀಕ್ಷಾ ಸ್ಥಳವನ್ನು ಬಿಟ್ಟು ಬರುವದಕ್ಕೆ ಸಹ ಅವಕಾಶ ಕೊಡುವದಿಲ್ಲವು.

(3) ಯಾವ ವಿದ್ಯಾರ್ಥಿಯೇ ಆಗಲಿ ಮತ್ತೊಬ್ಬ ವಿದ್ಯಾರ್ಥಿಯೊಡನೆ ಮಾತನಾಡುತ್ತಲಿದ್ದದ್ದಾಗಿಯಾಗಲಿ ಅಥವಾ ಇನ್ಯಾವ ವಿಧದಿಂದಲಾದರೂ ಬಳಸುತ್ತಿರುವದಾಗಿಯಾಗಲಿ ಕಂಡು ಹಿಡಿಯಲ್ಪಟ್ಟರೆ ಅಂಥಾ ವಿದ್ಯಾರ್ಥಿಯು ಕೊಠಡಿಯಿಂದ ಹೊರಗೆ ಹೊರಡಿಸಲ್ಪಡುವದಲ್ಲದೆ ಸದರೀ ಸಂಗತಿಯು ಇನ್ಸ್ಪೆಕ್ಟರ್ ಜನರಲ್ ಸಾಹೇಬರವರಿಗೆ ರಿಪೋರ್ಟು ಮಾಡಲ್ಪಡುವುದು.

(4) ಪರೀಕ್ಷಾ ಕೊಠಡಿಯೊಳಕ್ಕೆ ಸ್ಲೇಟುಗಳನ್ನಾಗಲಿ, ರೂಲರುಗಳನ್ನಾಗಲಿ, ಪುಸ್ತಕಗಳನ್ನಾಗಲಿ, ಬರದ ಕಾಗದಗಳನ್ನಾಗಲಿ, ಅಥವಾ ಇನ್ಯಾವ ವಿಧವಾದ ಕಾಗದ ಪತ್ರಗಳನ್ನಾಗಲಿ, ತೆಗೆದುಕೊಂಡು ಹೋಗಲು ಯಾವ ವಿದ್ಯಾರ್ಥಿಗಳಿಗೂ ಯಾವ ಸಂದರ್ಭದಲ್ಲಿಯೂ ಅವಕಾಶ ಕೊಡಲ್ಪಡುವದಿಲ್ಲವು. ಯಾವ ವಿದ್ಯಾರ್ಥಿಯಾಗಲಿ, ಈ ನಿಬಂಧನೆಗೆ ವಿರುದ್ಧವಾಗಿ ಆಚರಿಸುತ್ತಿರುವದಾಗಿಯಾಗಲಿ ಅಥವಾ ಇನ್ಯಾವ ಅಕೃತ್ಯಗಳನ್ನು ನಡೆಸುತ್ತಿರುವದಾಗಿಯಾಗಲಿ ಕಂಡು ಹಿಡಿಯಲ್ಪಟ್ಟರೆ ಅಂಥಾ ವಿದ್ಯಾರ್ಥಿಯು ಕೊಠಡಿಯಿಂದ ಹೊರಗೆ ಹೊರಡಿಸಲ್ಪಡುವದಲ್ಲದೆ ಸದರೀ ನಡವಳಿಕೆಯು ಇನ್ಸ್ಪೆಕ್ಟರ್ ಜನರಲ್ ಸಾಹೇಬರವರಿಗೆ ರಿಪೋರ್ಟು ಮಾಡಲ್ಪಡುವುದು.

(5) ವಿದ್ಯಾರ್ಥಿಯು ತನ್ನ ಪತ್ರವನ್ನು ಪೂರೈಸಿದ ಮೇಲೆ ತನ್ನ ಸ್ಥಳದಲ್ಲಿಯೇ ಇದ್ದು ನಿಂತು ಸೂಪರ್‌ವಿಜಿಡೆಂಟರು ಕಾಗದಗಳನ್ನು ತೆಗದುಕೊಳ್ಳುವ ವರೆಗೂ ಹಾಗೆಯೇ ನಿಂತಿರತಕ್ಕದ್ದು. ಯಾವದನ್ನಾದರೂ ಕೇಳಲಪೇಕ್ಷಿಸುವ ಯಾವ ವಿದ್ಯಾರ್ಥಿಯೇ ಆಗಲಿ ಮೇಲೆ ಹೇಳಿದ ರೀತಿ ನಡೆಸತಕ್ಕದ್ದೇ ಹೊರ್ತು ತನ್ನ ಸ್ಥಳವನ್ನು ಸರ್ವಥಾ ಬಿಡಕೂಡದು.

(6) ವಿದ್ಯಾರ್ಥಿಯ ಹೆಸರು, ರಿಜಿಸ್ಟರ್ ನಂಬರಿ ಇವುಗಳನ್ನು ಬರೆಯದೇ ಕಳುಹಿಸಲ್ಪಟ್ಟ ಯಾವ ಪತ್ರಿಕೆಯೂ ಪರೀಕ್ಷಿಸಲ್ಪಡುವದಿಲ್ಲವು.

(7) ಪ್ರಶ್ನೆ ಪತ್ರಗಳು ವಿನಹ ಯಾವ ಕಾಗದಗಳನ್ನಾಗಲಿ ಪರೀಕ್ಷಾ ಕೊಠಡಿಯಿಂದ ಹೊರಗೆ ತೆಗದುಕೊಂಡು ಹೋಗಲು ವಿದ್ಯಾರ್ಥಿಗಳಿಗೆ ಅಪ್ಪಣೆ ಕೊಡುವದಿಲ್ಲವು.

(8) ವಿದ್ಯಾರ್ಥಿಗಳು ಕಾಗದಗಳನ್ನು ಹರಿಯದಂತೆಯೂ ಮತ್ತು ನೆಲದಮೇಲೆ ಕಾಗದಗಳನ್ನು ಬಿಸಾಡದಂತೆಯೂ ನಿಷೇಧಿಸಲ್ಪಟ್ಟಿರುತ್ತಾರೆ. ಕೆಟ್ಟುಹೋದ ವಿಶಿಷ್ಟ ಕಾಗದಗಳೂ ವಿದ್ಯಾರ್ಥಿಯು ಬರೆಯುತ್ತಲಿದ್ದ ಮೇಜಿನಮೇಲೆಯೇ ಬಿಡಲ್ಪಡಬೇಕು.

ಎಚ್. ಜೆ. ಭಾಭಾ,
ಇನ್‌ಸ್ಪೆಕ್ಟರ್ ಜನರಲ್ ಆಫ್ ಎಜ್ಯುಕೇಷನ್.

ಫಾರೆಸ್ಟ್ ಇಲಾಖಾ.

ಸಂದಲ್ ಹರಾಜು ನೋಟಿಫಿಕೇಷನ್.

ತಾರೀಖು 18ನೆ ಆಗಸ್ಟ್ 1904ನೆ ಇಸವಿ.

ಇದರಿಂದ ಸಮಸ್ತ ಜನರಿಗು ತಿಳಿಯಪಡಿಸುವದೇನಂದರೆ :—ಮೈಸೂರು ಸರಕಾರದ ಶ್ರೀಗಂಧದ ಸಾಲೆಯಾನ ನಡಿಯತಕ್ಕ ಹರಾಜು ಈ ಕೆಳಗೆ ನಮೂದಿಸಿರುವ ಕೋಠಿಗಳಲ್ಲಿ ಅದರದರ ಬಾಜೂದಲ್ಲಿ ನಮೂದಿಸಿರುವ ತಾರೀಖುಗಳಲ್ಲಿ ಡಿಸ್ಟ್ರಿಕ್ಟ್ ಡೆಪ್ಯುಟಿ ಕಮ್ಮಿಷನರು ಅಥವಾ ಅವರಿಂದ ನೇಮಿಸಲ್ಪಡುವ ಇತರ ಅಫಿಸರು ಮತ್ತು ಡಿಸ್ಟ್ರಿಕ್ಟ್ ಫಾರೆಸ್ಟ್ ಆಫಿಸರುಗಳಿಂದ ನಡಿಸಲ್ಪಡುವದು :—

ಡಿಸ್ಟ್ರಿಕ್ಟ್.	ಕೋಠಿ.	ಹರಾಜು ತಾರೀಖು.		ಬೊತ್ತಿಗೆಗಳು ಹೆಚ್ಚ್ಚಾಗಿರುವ ಸಂಖ್ಯೆ.	ಪರಾ.
ಮೈಸೂರು ...	ಹುಣಸೂರು ...	1904ನೆ ಇಸವಿ ನವಂಬರ್ ತಾರೀಖು	19	500	
ಡಿಟೋ	ಶ್ರೀರಂಗಪಟ್ಣ	ಡಿಟೋ ಡಿಟೋ	23	240	
ಬೆಂಗಳೂರು ...	ಬೆಂಗಳೂರು ..	ಡಿಟೋ ಡಿಟೋ	26	120	ಕೋಲಾರ ಮತ್ತು ತುಮಕೂರು ಡಿಸ್ಟ್ರಿಕ್ಟ್ ಸಂದಲ್ ಕೇರಿರುತ್ತೆ.
ಹಾಸನ ...	ಹಾಸನ ..	1904ನೆ ಇಸವಿ ಡಿಸಂಬರ್	1	200	
ಕಡೂರು ..	ಚಿಕ್ಕಮಗಳೂರು ..	ಡಿಟೋ ಡಿಟೋ	5	200	
ಡಿಟೋ ..	ತರೀಕೆರೆ ..	ಡಿಟೋ ಡಿಟೋ	8	250	
ಶಿವಮೊಗ್ಗ ...	ಶಿವಮೊಗ್ಗ ...	ಡಿಟೋ ಡಿಟೋ	12	440	ಕಡೂರು ಮತ್ತು ಚಿತ್ರದುರ್ಗ ಡಿಸ್ಟ್ರಿಕ್ಟ್ ಸಂದಲ್ ಕೇರಿರುತ್ತೆ.
ಡಿಟೋ ..	ಸಾಗರ ..	ಡಿಟೋ ಡಿಟೋ	15	175	
ಡಿಟೋ ..	ತೀರ್ಥಹಳ್ಳಿ ..	ಡಿಟೋ ಡಿಟೋ	19	175	ಕಡೂರು ಡಿಸ್ಟ್ರಿಕ್ಟ್ ಸಂದಲ್ ಕೇರಿರುತ್ತೆ.

2. ಪ್ರತಿಬಂದು ಕೋಠಿಯಲ್ಲಿಯು ಹರಾಜು ಮಾಡಲ್ಪಡುವ ಸಂದಲ್ ಲಾಟು ಮತ್ತು ಮೊತ್ತ ವಗೈರೆ ತಪಶೀಲು ಐಯಿಂದ ಇದೇ ಸಾಲ್ ಆಕ್ಕ್ಷೋಣರು ಆಖೈರು ವಳಗಾಗಿ ಫಾಯಿಷು ಮಾಡಲ್ಪಡುತ್ತದೆ.

ಎಂ. ಮುತ್ತಣ್ಣ,
ಕನ್‌ಸರ್ವೇಟರ್ ಆಫ್ ಫಾರೆಸ್ಟ್ಸ್ ಇನ್ ಮೈಸೂರು.